ತಾಂತ್ರಿಕ ಶಿಕ್ಷಣ ಇಲಾಖೆ ನಿರ್ದೇಶಕರು, ಬೆಂಗಳೂರು ಇವರ ಕಚೇರಿ ನಡವಳಿಗಳು

ವಿಷಯ: ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಿಗೆ 2017-18ನೇ ಸಾಲಿನಲ್ಲಿ ಡಿಸೆಂಬರ್ 2017 ರ ಮಾಹೆಗೆ ಸಹಾಯನುದಾನ ಬಿಡುಗಡೆ ಬಗ್ಗೆ.

ಉಲ್ಲೇಖ:
1) ಸರ್ಕಾರಿ ಆದೇಶ ಸಂಖ್ಯೆ: ಇಡಿ 184 ಟಿಪಿಇ 2009 ದಿ: 27-7-2010
2) ಸರ್ಕಾರಿ ಆದೇಶ ಸಂಖ್ಯೆ: ಇಡಿ 184 ಟಿಪಿಇ 2009 ದಿ: 2-3-2010
3) ಸರ್ಕಾರಿ ಪತ್ರ ಸಂಖ್ಯೆ: ಇಡಿ 368 ಟಿಪಿಇ 2010 ದಿ: 16-5-2012

-000-

ಪ್ರಸ್ತಾವನೆ:

ಉಲ್ಲೇಖ (2) ರ ಸರ್ಕಾರಿ ಆದೇಶದಲ್ಲಿ, ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಟ್ಟಿರುವ ಎಲ್ಲಾ ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜು ಹಾಗೂ ಪಾಲಿಟೆಕ್ನಿಕ್‌ಗಳ ಸಿಬ್ಬಂದಿ ವರ್ಗದವರುಗಳಿಗೆ ಸರ್ಕಾರದ ಪಾಲಿನ ಸಹಾಯನುದಾನದ ಶೇ.85ರಷ್ಟು ಮೊತ್ತವನ್ನು ರಾಷ್ಟ್ರೀಕೃತ ಬ್ಯಾಂಕ್ ಮೂಲಕ ನೇರವಾಗಿ ಪ್ರತೀ ತಿಂಗಳು ಜಮೆ ಮಾಡುವ ಬಗ್ಗೆ ಸೂಕ್ತ ಕ್ರಮ ಜರುಗಿಸುವಂತೆ ತಾಂತ್ರಿಕ ಶಿಕ್ಷಣ ನಿರ್ದೇಶಕರಿಗೆ ಆದೇಶವನ್ನು ನೀಡಿರುತ್ತದೆ.

ಉಲ್ಲೇಖ (3)ರ ಆದೇಶದಲ್ಲಿ, 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರೂ' ನ್ನು "ನೋಡಲ್ ಬ್ಯಾಂಕ್" ಎಂದು ಗುರುತಿಸಿ ಅನುದಾನಿತ ಸಂಸ್ಥೆಗಳ ಎಲ್ಲಾ ಸಿಬ್ಬಂದಿ ವರ್ಗದವರು ಕಡ್ಡಾಯವಾಗಿ ತಮ್ಮ ತಮ್ಮ ಸಂಸ್ಥೆಗಳಿಗೆ ಹತ್ತಿರವಿರುವ 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ನ ಶಾಖೆಗಳಲ್ಲಿ ಉಳಿತಾಯ ಖಾತೆಗಳನ್ನು ತೆರೆಯಬೇಕೆಂಬ ನಿಬಂಧನೆಯನ್ನು ವಿಧಿಸಿ, ಆ ದಿನಾಂಕದವರೆವಿಗೂ 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ನ ಶಾಖೆಗಳಲ್ಲಿ ಉಳಿತಾಯ ಖಾತೆಗಳನ್ನು ಹೊಂದಿರುವ ಹಾಗೂ 2009-10ನೇ ಸಾಲಿನಲ್ಲಿ ಸಂಗ್ರಹಿಸಲಾಗಿರುವ ಬೋಧನಾ ಶುಲ್ಕದಲ್ಲಿ ಸರ್ಕಾರದ ಪಾಲಿನ ಶೇ.50ರಷ್ಟು ಮೊತ್ತವನ್ನು ಸರ್ಕಾರಕ್ಕೆ ಜಮೆ ಮಾಡಿರುವ ಒಟ್ಟು 39 ಅನುದಾನಿತ ಪಾಲಿಟೆಕ್ನಿಕ್ ಸಂಸ್ಥೆಗಳ ಸಿಬ್ಬಂದಿ ವರ್ಗದವರಿಗೆ ಸಹಾಯನುದಾನವನ್ನು ಪಾವತಿಸಲು ಆದೇಶಿಸಿರುತ್ತದೆ.

ಈ ಕೆಳಕಂಡ ಅನುದಾನಿತ ಸಂಸ್ಥೆಗಳು, ತಮ್ಮ ಸಂಸ್ಥೆಗಳ ಆವರಣದಲ್ಲಿಯೇ ಹಲವಾರು ವರ್ಷಗಳಿಂದ ರಾಷ್ಟ್ರೀಕೃತ ಬ್ಯಾಂಕ್‌ಗಳ ಶಾಖೆಗಳನ್ನು ಹೊಂದಿದ್ದು, ತಮ್ಮ ಸಂಸ್ಥೆಯ ಸಿಬ್ಬಂದಿ ವರ್ಗದವರುಗಳಿಗೆ ಸದರಿ ಬ್ಯಾಂಕ್‌ಗಳ ಮೂಲಕವೇ ಸಹಾಯನುದಾನವನ್ನು ವಿತರಿಸಬೇಕೆಂದು ಸರ್ಕಾರವನ್ನು ಕೋರಿರುವ ಮೇರೆಗೆ ದಿನಾಂಕ: 22-5-2010 ರಂದು ಮಾನ್ಯ ಉನ್ನತ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಇಲಾಖಾ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಇಲಾಖೆಗೆ ನಿರ್ದೇಶನವನ್ನು ನೀಡಲಾಗಿದೆ. ಈ ಬಗ್ಗೆ ಸೂಕ್ತ ಆದೇಶವನ್ನು ನೀಡುವಂತೆ ಈಗಾಗಲೇ ಸರ್ಕಾರವನ್ನು ಕೋರಲಾಗಿದೆ.

ಈ ಸಂಬಂಧ ಸರ್ಕಾರವು ಉಲ್ಲೇಖ(4)ರ ಪತ್ರದಲ್ಲಿ 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ಅನ್ನು "ನೋಡಲ್ ಬ್ಯಾಂಕ್" ಎಂದು ಗುರುತಿಸಿ ನಿರ್ದೇಶನ ನೀಡಿರುವ ಹಿನ್ನೆಲೆಯಲ್ಲಿ ಸದರಿ ಬ್ಯಾಂಕ್ ಮೂಲಕ 'ಇಸಿಎಸ್' ಪದ್ಧತಿಯಲ್ಲಿ ಸಹಾಯನುದಾನ ಬಿಡುಗಡೆ ಮಾಡಬೇಕಾಗಿರುತ್ತದೆ. ಆದರೆ ಸದರಿ ಸಂಸ್ಥೆಗಳ ಸಿಬ್ಬಂದಿ ವರ್ಗದವರು ಬ್ಯಾಂಕ್ ಖಾತೆ ತೆರೆಯಲು ಕಾಲವಕಾಶ ನೀಡಬೇಕಾಗಿರುವುದರಿಂದ ಹಳೇ ಪದ್ಧತಿಯಲ್ಲಿ ಸಹಾಯನುದಾನವನ್ನು ಬಿಡುಗಡೆ ಮಾಡಬೇಕಾಗಿರುತ್ತದೆ.

ಈಗ, ಈ ಕೆಳಕಂಡ ಅನುದಾನಿತ ಸಂಸ್ಥೆಗಳಿಗೆ ಅವುಗಳು ಇಲಾಖೆಗೆ ಸಲ್ಲಿಸಿರುವ ಕ್ಲೇಮಿನ ಆಧಾರದ ಮೇಲೆ ಸರ್ಕಾರದ ಪಾಲಿನ ಶೇ.85 ರಷ್ಟು ಮೊತ್ತವನ್ನು ಕೆಳಕಂಡ ಪಟ್ಟಿಯ ಕಾಲಂ(4) ರಲ್ಲಿ ಕಾಣಿಸಿರುವಂತೆ ಡಿಸೆಂಬರ್ 2017 ರ ಮಾಹೆಗೆ ಸಹಾಯನುದಾನವನ್ನು ಬಿಡುಗಡೆ ಮಾಡಬೇಕಾಗಿರುತ್ತದೆ.

# ಅನುಬಂಧ

| ಕ್ರ.ಸಂ | ಸಂಸ್ಥೆಯ ಹೆಸರು | ಡಿಸೆಂಬರ್ 2017 ರ ಮಾಹೆಗೆ ಪ್ರಿನ್ಸಿಪಾಲರು ಕ್ಲೇಮು ಮಾಡಿರುವ 100% ಮೊತ್ತ (ರೂ.ಗಳಲ್ಲಿ) | ಸಂಸ್ಥೆಗೆ ಬಿಡುಗಡೆ ಮಾಡಲಾದ ಒಟ್ಟು ಸಹಾಯನುದಾನದ 85% ಮೊತ್ತ (ರೂ.ಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಶ್ರೀ ಜಯಚಾಮರಾಜೇಂದ್ರ ಕಾಲೇಜು ಇಂಜಿನಿಯರಿಂಗ್, ಮೈಸೂರು. | 16786741-00 | 14268730-00 |
| 2 | ನ್ಯಾಷನಲ್ ಇನ್ಸ್ಟಿಟ್ಯೂಟ್ ಆಫ್ ಇಂಜಿನಿಯರಿಂಗ್, ಮೈಸೂರು. | 11420989-00 | 9707841-00 |
| **ಒಟ್ಟು ರೂ.** | | **28207730-00** | **23976571-00** |

ಮೇಲೆ ವಿವರಿಸಿರುವಂತೆ ಮೇಲ್ಕಂಡ ಅನುದಾನಿತ ಸಂಸ್ಥೆಗಳಿಗೆ ಕಾಲಂ(4) ರಲ್ಲಿ ಕಾಣಿಸಿರುವ ಒಟ್ಟು ಮೊತ್ತ ರೂ.23976571/-(ರುಪಾಯಿ ಎರಡು ಕೋಟಿ ಮುವತ್ತೊಂಬತ್ತು ಲಕ್ಷದ ಎಪ್ಪತ್ತಾರು ಸಾವಿರದ ಐದು ನೂರಾ ಎಪ್ಪತ್ತೊಂದು ಮಾತ್ರ)ಗಳನ್ನು ಬಿಡುಗಡೆಗೊಳಿಸಲು ನಿರ್ಧರಿಸಲಾಗಿದೆ. ಆದುದರಿಂದ, ಈ ಕೆಳಕಂಡ ಆದೇಶ.

ಆದೇಶ

**ಸಂಖ್ಯೆ: ಡಿಟಿಇ 50 ಜಿಆರ್‌ಟಿ (2) 2017 ಬೆಂಗಳೂರು, ದಿನಾಂಕ: 3-1-18**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಮೇಲ್ಕಂಡ ಪಟ್ಟಿಯ ಕಾಲಂ (2)ರಲ್ಲಿ ಕಾಣಿಸಿರುವ ಅನುದಾನಿತ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ, ಕಾಲಂ(4)ರಲ್ಲಿ ಕಾಣಿಸಿರುವ ರೂ.23976571/-(ರುಪಾಯಿ ಎರಡು ಕೋಟಿ ಮುವತ್ತೊಂಬತ್ತು ಲಕ್ಷದ ಎಪ್ಪತ್ತಾರು ಸಾವಿರದ ಐದು ನೂರಾ ಎಪ್ಪತ್ತೊಂದು ಮಾತ್ರ)ಗಳನ್ನು ಸರ್ಕಾರದ ಪಾಲಿನ ಸಹಾಯನುದಾನವಾಗಿ ಡಿಸೆಂಬರ್ 2017 ರ ಮಾಹೆಗೆ ಸಂಬಂಧಿಸಿದಂತೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗೊಳಪಡಿಸಿ ಬಿಡುಗಡೆ ಮಾಡಲಾಗಿದೆ ಹಾಗೂ ಈ ಮೊತ್ತವನ್ನು ಸಿ.ಟಿ.ಎಸ್.8ರಲ್ಲಿ ಡ್ರಾ ಮಾಡಿ ವಿತರಿಸಲು ಆದೇಶಿಸಲಾಗಿದೆ.

**ಷರತ್ತು ಮತ್ತು ನಿಬಂಧನೆಗಳು:**

1) ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಆಯಾ ಸಂಸ್ಥೆಗಳು ಸಲ್ಲಿಸಿರುವ ಬಿಲ್ಲುಗಳನುಸಾರ, ಉಲ್ಲೇಖ(2)ರ ಸರ್ಕಾರದ ಆದೇಶದನ್ವಯ ಸರ್ಕಾರದ ಪಾಲಿನ ಶೇ.85ರಷ್ಟು ಮೊತ್ತವನ್ನು ಪರಿಗಣಿಸಲಾಗಿದೆ. ಆದುದರಿಂದ, ಈ ಪಾವತಿಯು ಇಲಾಖೆಯ ಕೂಲಂಕಷ ಲೆಕ್ಕತಪಾಸಣೆಗೆ ಒಳಪಟ್ಟಿರುತ್ತದೆ.
2) ಲೆಕ್ಕ ತಪಾಸಣೆಯಲ್ಲಿ ಹೆಚ್ಚುವರಿ ಅನುದಾನವು ಪಾವತಿಯಾಗಿರುವುದು ಕಂಡುಬಂದಲ್ಲಿ, ಆಯಾ ಸಂಸ್ಥೆಗಳಿಂದ ಇಲಾಖೆಯು ನಿರ್ಧರಿಸುವ ರೀತಿಯಲ್ಲಿ ವಸೂಲಿಸಲಾಗುವುದು.

3) 2016–17 ನೇ ಸಾಲಿನಲ್ಲಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ 'ಬಳಕೆ ಪ್ರಮಾಣಪತ್ರ' ಹಾಗೂ 'ಸಿಎ' ದೃಢೀಕೃತ ಲೆಕ್ಕಪರಿಶೋಧನಾ ವರದಿಯನ್ನು ಕ.ಆ.ಸಂಹಿತೆ ಅನುಚ್ಛೇದ 161ರ ಅನ್ವಯ ಇಲಾಖೆಗೆ ಸಲ್ಲಿಸತಕ್ಕದ್ದು.

4) ಇದಕ್ಕೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ 2203–ತಾಂತ್ರಿಕ ಶಿಕ್ಷಣ–00–104–ಸರ್ಕಾರೇತರ ತಾಂತ್ರಿಕ ಕಾಲೇಜು ಮತ್ತು ಸಂಸ್ಥೆಗಳಿಗೆ ಸಹಾಯ–0–01 ಸರ್ಕಾರೇತರ ತಾಂತ್ರಿಕ ಶಾಲೆಗಳು–101 ಸಹಾಯಾನುದಾನ [2203–00–104–0–01–101) ಅಡಿ 2017–18 ರ ಸಾಲಿನ ಆಯವ್ಯಯದಲ್ಲಿ ಭರಿಸತಕ್ಕದ್ದು.

5) ಪ್ರಪತ್ರ ಕ.ಆ.ಸಂ.–3 ಅನುಚ್ಛೇದ–24ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅನುದಾನದ ಬಿಲ್ಲನ್ನು ತಯಾರಿಸಿ ಸಲ್ಲಿಸತಕ್ಕದ್ದು.

ನಿರ್ದೇಶಕರು

ಇವರಿಗೆ ಸೂಕ್ತ ಕ್ರಮಕ್ಕಾಗಿ,

1) ಪ್ರಾಚಾರ್ಯರು – ಮೇಲ್ಕಂಡ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಿಗೆ.
2) ನಿರ್ದೇಶನಾಲಯದ ಬಿಎಲ್ಎಸ್(3)
3) ನಿರ್ದೇಶನಾಲಯದ ನಗದು ಶಾಖೆ.

ಪ್ರತಿ:

1) ಮಹಾಲೇಖಪಾಲರು (ಎ&ಇ), ಕರ್ನಾಟಕ, ಬೆಂಗಳೂರು.
2) ಸ್ಪೆಷಲ್ ಸೆಲ್, ಮಹಾಲೇಖಪಾಲರ ಕಚೇರಿ, ಕರ್ನಾಟಕ, ಬೆಂಗಳೂರು.
3) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು ಇವರ ಮಾಹಿತಿಗಾಗಿ.
4) ಲೆಕ್ಕಾಧಿಕಾರಿಯವರು(ಬಿಲ್ಸ್), ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
5) ಆಡಳಿತಾಧಿಕಾರಿಯವರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
6) ನಿರ್ದೇಶನಾಲಯದ ಐಎನ್ಎಸ್ (1), (2), (4) ಮತ್ತು ಆರ್ಇಸಿ(2).
7) ಮತ್ತು (8) ಹೆಚ್ಚುವರಿ ಪ್ರತಿ.
8) ಕಛೇರಿ ಪ್ರತಿ.

ತಾಂತ್ರಿಕ ಶಿಕ್ಷಣ ನಿರ್ದೇಶಕರು, ಕರ್ನಾಟಕ, ಬೆಂಗಳೂರು ಇವರ ಕಚೇರಿ ನಡವಳಿಗಳು

ವಿಷಯ: ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಈ ಕೆಳಕಂಡ ಖಾಸಗಿ ಅನುದಾನಿತ ಸಂಸ್ಥೆಗಳ ಸಿಬ್ಬಂದಿ ವರ್ಗದವರಿಗೆ 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ಮೂಲಕ ನೇರವಾಗಿ ಡಿಸೆಂಬರ್ 2017 ರ ಮಾಹೆಯ ಸರ್ಕಾರದ ಪಾಲಿನ ಸಹಾಯನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರಿ ಆದೇಶ ಸಂಖ್ಯೆ: ಇಡಿ/55/ಟಿಜಿಎಲ್/64, ದಿ: 29-10-1966.
2) ಸರ್ಕಾರಿ ಆದೇಶ ಸಂಖ್ಯೆ: ಇಡಿ/184/ಟಿಪಿಇ 2009, ದಿ: 27.07.2009
3) ಸರ್ಕಾರಿ ಆದೇಶ ಸಂಖ್ಯೆ ಇಡಿ. 368 ಟಿಪಿಇ 2012, ದಿ: 16.10.2012
4) ಸರ್ಕಾರಿ ಆದೇಶ ಸಂಖ್ಯೆ: ಇಡಿ /184/ಟಿಪಿಇ/ 2009, ದಿ: 02.03.2010
5) ಸರ್ಕಾರಿ ಆದೇಶ ಸಂಖ್ಯೆ: ಇಡಿ /184/ಟಿಪಿಇ/ 2009, ದಿ: 14-05-2010
6) ಸರ್ಕಾರಿ ಆದೇಶ ಸಂಖ್ಯೆ: ಇಡಿ /184/ಟಿಪಿಇ/ 2009, ದಿ: 14-03-2011

ಪ್ರಸ್ತಾವನೆ:-

ಉಲ್ಲೇಖ(2)ರ ಸರ್ಕಾರದ ಆದೇಶದಲ್ಲಿ ಸರ್ಕಾರವು ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಖಾಸಗಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಹಾಗೂ ಪಾಲಿಟೆಕ್ನಿಕ್‌ಗಳ ಸಿಬ್ಬಂದಿಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡುವ ಶೇ.85 ರಷ್ಟು ಸಹಾಯನುದಾನವನ್ನು ಹಾಗೂ ಸಂಬಂಧಪಟ್ಟ ಸಂಸ್ಥೆಗಳು ನೀಡಬೇಕಾಗಿರುವ ಶೇ.15ರಷ್ಟು ವೇತನವನ್ನು ಪ್ರತೀ ತಿಂಗಳು ರಾಷ್ಟ್ರೀಕೃತ ಬ್ಯಾಂಕ್‌ಗೆ ಜಮೆ ಮಾಡುವ ಮೂಲಕ ಸಿಬ್ಬಂದಿ ವರ್ಗದವರುಗಳಿಗೆ (ಬೋಧಕ ಮತ್ತು ಬೋಧಕೇತರ) ವಿತರಿಸಲು ಸರ್ಕಾರವು ಅನುಮತಿಸಿರುತ್ತದೆ. ಹಾಗೂ ಈ ಸಂಬಂಧ ಮುಂದಿನ ಅಗತ್ಯ ಕ್ರಮವನ್ನು ತಾಂತ್ರಿಕ ಶಿಕ್ಷಣ ನಿರ್ದೇಶಕರು ಕೈಗೊಳ್ಳಲು ಆದೇಶಿಸಿರುತ್ತದೆ. ಉಲ್ಲೇಖ (3) ರ ಆದೇಶದಲ್ಲಿ ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗದವರಿಗೆ ಅನುದಾನದ ಮೊತ್ತವನ್ನು ದಿ: 16.10.2012 ರಿಂದ ಅನ್ವಯಿಸುವಂತೆ ಶೇ.85 ರಿಂದ ಶೇ.100 ಕ್ಕೆ ಹೆಚ್ಚಿಸಲಾಗಿದೆ.

ಉಲ್ಲೇಖ (4) ಮತ್ತು (5) ರ ಆದೇಶಗಳನ್ವಯ, ಇಲಾಖೆಯು ತನ್ನ ಅಧೀನಕ್ಕೆ ಒಳಪಟ್ಟಿರುವ ಎಲ್ಲಾ ಅನುದಾನಿತ ಸಂಸ್ಥೆಗಳಿಗೆ, 'ಸ್ಟೇಟ್ ಬ್ಯಾಂಕ್ ಆಫ್ ಮೈಸೂರು' ಶಾಖೆಗಳಲ್ಲಿ ಸಿಬ್ಬಂದಿ ವರ್ಗದವರ ಹಾಗೂ ಪ್ರಾಂಶುಪಾಲರ ಹೆಸರಿನಲ್ಲಿ ಪ್ರತ್ಯೇಕ ಉಳಿತಾಯ ಖಾತೆಗಳನ್ನು ತೆರೆಯುವಂತೆ ಸೂಚನೆಯನ್ನು ನೀಡಿದ್ದು, ಅದರಂತೆ, ಈ ಕೆಳಕಂಡ ಅನುದಾನಿತ ಸಂಸ್ಥೆಗಳು ಸಿಬ್ಬಂದಿ ವರ್ಗದವರ ಹಾಗೂ ಪ್ರಾಂಶುಪಾಲರ ಹೆಸರಿನಲ್ಲಿ ಪ್ರತ್ಯೇಕ ಖಾತೆಗಳನ್ನು ತೆರೆದಿರುವ ಬಗ್ಗೆ ಮಾಹಿತಿಯನ್ನು ನೀಡಿರುತ್ತವೆ ಹಾಗೂ ಡಿಸೆಂಬರ್ 2017 ರ ಮಾಹೆಯ ಸಹಾಯನುದಾನ ಬಿಲ್ಲುಗಳನ್ನು ಪಾವತಿಗಾಗಿ ಈ ಕಚೇರಿಗೆ ಸಲ್ಲಿಸಿರುತ್ತವೆ.

ಈ ಹಿನ್ನೆಲೆಯಲ್ಲಿ, ಸಂಸ್ಥೆಗಳು ಸಲ್ಲಿಸಿರುವ ಡಿಸೆಂಬರ್ 2017 ರ ಸಹಾಯನುದಾನ ಬಿಲ್ಲುಗಳನ್ನು ಪರಿಶೀಲಿಸಲಾಗಿದೆ. ಕೆಳಕಂಡ ಎಲ್ಲಾ ಸಂಸ್ಥೆಯ ಕ್ಲೈಮ್‌ಗಳನ್ನು ಇಲಾಖೆಯ ಪೂರ್ಣ ಲೆಕ್ಕ ತಪಾಸಣೆಯ ನಿಬಂಧನೆಗೊಳಪಡಿಸಿ, ಈ ಕೆಳಕಂಡ ಪಟ್ಟಿಯ ಕಾಲಂ(6) ರಲ್ಲಿ ಕಾಣಿಸಿರುವ ಮೊತ್ತ ರೂ.**29387462/-(ರುಪಾಯಿ ಎರಡು ಕೋಟಿ ತೊಂಬತ್ತಮೂರು ಲಕ್ಷದ ಎಂಬತ್ತೇಳು ಸಾವಿರದ ನಾಲ್ಕು ನೂರಾ ಅರವತ್ತೆರಡು ಮಾತ್ರ**)ಗಳನ್ನು ನೇರವಾಗಿ ಸಿಬ್ಬಂದಿವರ್ಗದವರಿಗೆ ವಿತರಿಸುವ ಸಲುವಾಗಿ; ಕಾಲಂ(5) ರಲ್ಲಿ ಕಾಣಿಸಿರುವ ಮೊತ್ತ ರೂ.**43790360/-(ರುಪಾಯಿ ನಾಲ್ಕು ಕೋಟಿ ಮುವತ್ತೇಳು ಲಕ್ಷದ ತೊಂಬತ್ತು ಸಾವಿರದ ಮೂರು ನೂರಾ ಅರವತ್ತು ಮಾತ್ರ**)ಗಳನ್ನು ಬಿಲ್ಲಿನಲ್ಲಿ ಕಡಿತಗೊಳಿಸಿರುವ ಮೊತ್ತವನ್ನು ಸಂಬಂಧಪಟ್ಟ ಖಾತೆಗಳಿಗೆ ವಿತರಿಸಲು ಅನುಕೂಲವಾಗುವಂತೆ ಪ್ರಿನ್ಸಿಪಾಲರ ಖಾತೆಗೆ ಜಮೆ ಮಾಡುವುದಕ್ಕಾಗಿ; ಒಟ್ಟಾರೆ ಕಾಲಂ(4) ರಲ್ಲಿ ಕಾಣಿಸಿರುವ ಒಟ್ಟು ಮೊತ್ತ ರೂ.**73177822/-(ರುಪಾಯಿ ಏಳು ಕೋಟಿ ಮುವತ್ತೊಂದು ಲಕ್ಷದ ಎಪ್ಪತ್ತೇಳು ಸಾವಿರದ ಎಂಟು ನೂರಾ ಇಪ್ಪತ್ತೆರಡು ಮಾತ್ರ**)ಗಳನ್ನು ಡಿಸೆಂಬರ್ 2017 ರ ಮಾಹೆಯ ಸಹಾಯನುದಾನವನ್ನು ವಿತರಿಸುವ ಸಲುವಾಗಿ ಬಿಡುಗಡೆಗೊಳಿಸಲು ತೀರ್ಮಾನಿಸಲಾಗಿದೆ. ಆದುದರಿಂದ,ಈ ಕೆಳಕಂಡ ಆದೇಶ.

## ಆದೇಶ

**ಸಂಖ್ಯೆ: ಡಿಟಿಇ 49 ಜಿಆರ್‌ಟಿ(2) 2017 ಬೆಂಗಳೂರು, ದಿ:3-1-18**

ಮೇಲ್ಕಂಡ ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಡಿಸೆಂಬರ್ **2017**ರ ಮಾಹೆಯ ವೇತನ ಕಾಲಂ(6) ರಲ್ಲಿ ಕಾಣಿಸಿರುವ ಮೊತ್ತ ರೂ.**29387462/-(ರುಪಾಯಿ ಎರಡು ಕೋಟಿ ತೊಂಬತ್ತಮೂರು ಲಕ್ಷದ ಎಂಬತ್ತೇಳು ಸಾವಿರದ ನಾಲ್ಕು ನೂರಾ ಅರವತ್ತೆರಡು ಮಾತ್ರ)**ಗಳನ್ನು ಈ ಕೆಳಕಂಡ ಖಾಸಗಿ ಅನುದಾನಿತ ಸಂಸ್ಥೆಗಳ ಬೋಧಕ/ಬೋಧಕೇತರ ಸಿಬ್ಬಂದಿ ವರ್ಗದವರುಗಳ ಉಳಿತಾಯಖಾತೆಗಳಿಗೆ ನೇರವಾಗಿ ಜಮೆ ಮಾಡುವ ಸಂಬಂಧವಾಗಿ; ಕಡಿತಗಳನ್ನು ಸಂಬಂಧಿಸಿದ ಕಡಿತಗಳ ಖಾತೆಗಳಿಗೆ ವಿತರಿಸುವುದಕ್ಕಾಗಿ, ಸಂಬಂಧಪಟ್ಟ ಪ್ರಿನ್ಸಿಪಾಲರ ಖಾತೆಗೆ ಜಮೆ ಮಾಡಲು ಹಾಗೂ ಕಾಲಂ(5)ರಲ್ಲಿ ಕಾಣಿಸಿರುವ ಮೊತ್ತ ರೂ.**43790360/-(ರುಪಾಯಿ ನಾಲ್ಕು ಕೋಟಿ ಮುವತ್ತೇಳು ಲಕ್ಷದ ತೊಂಬತ್ತು ಸಾವಿರದ ಮೂರು ನೂರಾ ಅರವತ್ತು ಮಾತ್ರ)**ಗಳು ಸೇರಿ ಒಟ್ಟಾರೆ ಕಾಲಂ (4) ರಲ್ಲಿ ಕಾಣಿಸಿರುವ ವಾಸ್ತವಿಕ ಸಹಾಯನುದಾನದ ಸರ್ಕಾರದ ಪಾಲಿನ ಮೊತ್ತ ರೂ.**73177822/-(ರುಪಾಯಿ ಏಳು ಕೋಟಿ ಮುವತ್ತೊಂದು ಲಕ್ಷದ ಎಪ್ಪತ್ತೇಳು ಸಾವಿರದ ಎಂಟು ನೂರಾ ಇಪ್ಪತ್ತೆರಡು ಮಾತ್ರ)**ಗಳನ್ನು ಈ ಮೂಲಕ ಬಿಡುಗಡೆ ಮಾಡಲಾಗಿದೆ ಹಾಗೂ ಈ ಮೊತ್ತವನ್ನು ಸಿ.ಟಿ.ಎಸ್.8 ರಲ್ಲಿ **'ಡ್ರಾ'** ಮಾಡಿ ವಿತರಿಸಲು ಆದೇಶಿಸಲಾಗಿದೆ.

### ಅನುಬಂಧ

| ಕ್ರ.ಸಂ | ಸಂಸ್ಥೆ ಸಂಕೇತ ಸಂಖ್ಯೆ | ಸಂಸ್ಥೆಯ ಹೆಸರು | ಡಿಸೆಂಬರ್ 2017 ಮಾಹೆಯ ಸರ್ಕಾರದ ಪಾಲಿನ ಮೊತ್ತ (ರೂ.) | ಪ್ರಿನ್ಸಿಪಾಲರ ಖಾತೆಗೆ ಜಮೆಯಾಗ ಬೇಕಾದ ಮೊತ್ತ (ರೂ.) | ನೌಕರರ ಖಾತೆಗೆ ಜಮೆಯಾಗ ಬೇಕಾದ ಒಟ್ಟು ಮೊತ್ತ (ರೂ.) |
|---|---|---|---|---|---|
| 1 | 2 | 3 | 4 | 5 | 6 |
| 1 | ಇ202 | ಬಿವಿಬಿ ಇಂಜಿನಿಯರಿಂಗ್ ಕಾಲೇಜು, ಹುಬ್ಬಳ್ಳಿ | 0 | 0 | 0 |
| 2 | ಇ203 | ಪಿಇಎಸ್ ಇಂಜಿನಿಯರಿಂಗ್ ಕಾಲೇಜು, ಮಂಡ್ಯ | 11484265 | 4292131 | 7192134 |
| 3 | ಇ204 | ಮಲೆನಾಡು ಇಂಜಿನಿಯರಿಂಗ್ ಕಾಲೇಜು, ಹಾಸನ | 9755665 | 3320843 | 6434822 |
| 4 | ಇ205 | ಪಿಡಿಎ ಇಂಜಿನೀಯರಿಂಗ್ ಕಾಲೇಜು, ಕಲಬುರ್ಗಿ | 11636698 | 4244915 | 7391783 |
| 5 | ಇ207 | ಡಾ: ಅಂಬೇಡ್ಕರ್ ತಾಂತ್ರಿಕ ಮಹಾವಿದ್ಯಾಲಯ, ಬೆಂಗಳೂರು | 16640766 | 16069945 | 570821 |
| 6 | ಇ208 | ಬಸವೇಶ್ವರ ಇಂಜಿನೀಯರಿಂಗ್ ಕಾಲೇಜ್, ಬಾಗಲ್‌ಕೋಟೆ | 9533306 | 2574580 | 6958726 |
| 7 | ಇ209 | ಬಿಎಂಎಸ್ ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು | 11558554 | 10823893 | 734661 |
| 8 | ಇ210 | ಬಿಎಂಎಸ್ (ಸಂಜೆ) ಇಂಜಿನಿಯರಿಂಗ್ ಕಾಲೇಜು, ಬೆಂಗಳೂರು | 2568568 | 2464053 | 104515 |
| | | **ಒಟ್ಟು ಮೊತ್ತ ರೂ.** | **73177822** | **43790360** | **29387462** |

ಮೇಲ್ಕಂಡ ಅನುಬಂಧದಲ್ಲಿನ ಸಂಸ್ಥೆಗಳ ಪೈಕಿ ಕ್ರ.ಸಂ.1 ರಲ್ಲಿನ ಸಂಸ್ಥೆಗೆ, ಈ ಕಛೇರಿಯ ಅ.ಸ.ಪ ಸಂ ಡಿಟಿಇ 69 ಇಎಸ್‌ಟಿ 4(ಎ) 2012-13 ರನ್ವಯ ಸಹಾಯನುದಾನವನ್ನು ತಡೆಹಿಡಿಯಲಾಗಿದೆ.

ಷರತ್ತು ಮತ್ತು ನಿಬಂಧನೆಗಳು:-

1)ಇಂಜನೀಯರಿಂಗ್ ಕಾಲೇಜುಗಳಿಗೆ ಸಂಬಂಧಪಟ್ಟಂತೆ ಸಹಾಯನುದಾನವನ್ನು ಪ್ರಿನ್ಸಿಪಾಲರುಗಳು ಸಲ್ಲಿಸಿರುವ ಬಿಲ್ಲಿನ ಆಧಾರದ ಹಾಗೂ ಉಲ್ಲೇಖ(2)ರ ಸರ್ಕಾರದ ಆದೇಶದನ್ವಯ ವಾಸ್ತವಿಕ ಸಹಾಯನುದಾನದ ಸರ್ಕಾರದ ಪಾಲಿನ ಶೇ.85ರಷ್ಟು ವೇತನವನ್ನು ಪರಿಗಣಿಸಲಾಗಿದೆ. ಈ ಅನುದಾನ ಬಿಡುಗಡೆಯು ಇಲಾಖೆಯ ಕೂಲಂಕಷ ಲೆಕ್ಕ ತಪಾಸಣೆಗೆ ಒಳಪಟ್ಟಿರುತ್ತದೆ.

2)ಯಾವೊಬ್ಬ ನೌಕರನಿಗೆ ಹೆಚ್ಚಿನ ಅನುದಾನ ಪಾವತಿಯಾಗಿದ್ದು ಕಂಡು ಬಂದಲ್ಲಿ, ಅಂತಹ ನೌಕರನಿಂದ ನೀಡಲಾಗಿರುವ ಹೆಚ್ಚುವರಿ ಮೊತ್ತವನ್ನು ನೇರವಾಗಿ ವಸೂಲಿ ಮಾಡಲಾಗುವುದು.

3)2016-17 ನೇ ಸಾಲಿನಲ್ಲಿ ಇಲಾಖೆಯಿಂದ ಬಿಡುಗಡೆಯಾಗಿರುವ ಅನುದಾನದ ಬಗ್ಗೆ 'ಬಳಕೆ ಪ್ರಮಾಣಪತ್ರ' ಹಾಗೂ 'ಸಿಎ' ದೃಢೀಕೃತ ಲೆಕ್ಕಪರಿಶೋಧನಾ ವರದಿಯನ್ನು ಕ.ಆ.ಸಂಹಿತೆ ಅನುಚ್ಛೇದ 161ರ ಅನ್ವಯ ಇಲಾಖೆಗೆ ಸಲ್ಲಿಸತಕ್ಕದ್ದು.

4)ಈಗ ಬಿಡುಗಡೆ ಮಾಡಿರುವ ಅನುದಾನ ಮೊತ್ತದ ಖರ್ಚನ್ನು 2017-18 ನೇ ಸಾಲಿನ ಕೆಳಕಂಡ ಲೆಕ್ಕ ಶೀರ್ಷಿಕೆಯಲ್ಲಿ ಭರಿಸತಕ್ಕದ್ದು. 2203-ತಾಂತ್ರಿಕ ಶಿಕ್ಷಣ-00-104-ಸರ್ಕಾರೇತರ ತಾಂತ್ರಿಕ ಕಾಲೇಜುಗಳು, ಹಾಗೂ ಸಂಸ್ಥೆಗಳಿಗೆ ಸಹಾಯಾನುದಾನ-0-01-ಸರ್ಕಾರೇತರ ತಾಂತ್ರಿಕ ಶಾಲೆಗಳು-101-ಸಹಾಯಾನುದಾನ(2203-00-104-0-01-101).

ನಿರ್ದೇಶಕರು.

ಇವರಿಗೆ ಸೂಕ್ತ ಕ್ರಮಕ್ಕಾಗಿ:

1) ಪ್ರಾಚಾರ್ಯರುಗಳಿಗೆ ಮೇಲ್ಕಂಡ ಅನುಬಂಧದಲ್ಲಿಯ ವಿದ್ಯಾಲಯಗಳಿಗೆ.
2) ನಿರ್ದೇಶನಾಲಯದ ಬಿಎಲ್‌ಎಸ್[3]
3) ನಿರ್ದೇಶನಾಲಯದ ನಗದು ಶಾಖೆ.

ಪ್ರತಿ ಮಾಹಿತಿಗಾಗಿ:

1] ಮಹಾಲೇಖಪಾಲರು(ಎ&ಇ), ಕರ್ನಾಟಕ, ಬೆಂಗಳೂರು.
2] ಸ್ಪೆಷಲ್ ಸೆಲ್, ಮಹಾಲೇಖಪಾಲರವರ ಕಛೇರಿ, ಬೆಂಗಳೂರು.
3] ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು. ಇವರ ಮಾಹಿತಿಗಾಗಿ
4] ಲೆಕ್ಕಾಧಿಕಾರಿಗಳು [ಬಿಲ್ಸ್].
5] ನಿರ್ದೇಶನಾಲಯದ ಐಎನ್‌ಎಸ್ (1), (2), (4) ಮತ್ತು ಆರ್‌ಇಸಿ(2) ಉಪಶಾಖೆಗಳಿಗೆ.
6] ಹೆಚ್ಚುವರಿ ಪ್ರತಿ
7] ಕಛೇರಿ ಪ್ರತಿ